**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 6/2024**

**ಚಾ.ಸಾ. :-6**
**ಪ್ರಾ.ಸಾ. :-6**

ಹೆಸರು : ಕೈರುನ್ನೀಸಾ

ತಂದೆಯ ಹೆಸರು : ಪಾಷ ಸಾಹೇಬ್

ವಯಸ್ಸು : 52 ವರ್ಷ

ಉದ್ಯೋಗ : ಗೃಹಿಣಿ

ವಾಸಸ್ಥಳ : ಮೈಸೂರು

---

**ಪ್ರಮಾಣೀಕರಿಸಲಾದ ದಿನಾಂಕಃ- 09.03.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ಇಕ್ಬಾಲ್ ಪಾಷ ನನ್ನ ಗಂಡ. ಚಾ.ಸಾ-1 ರಿಂದ 5, 7 ಮತ್ತು 8 ನನ್ನ ಕುಟುಂಬದವರು. ಆರೋಪಿ ನನ್ನ ಸಂಬಂಧಿಕ. 2023 ರಲ್ಲಿ ಒಂದು ಕಾರ್ಯಕ್ರಮಕ್ಕೆ ಹೋಗಿ ವಾಪಾಸ್ಸು ಬೆಳಗ್ಗಿನ ಜಾವ ನಾನು, ಚಾ.ಸಾ-1 ರಿಂದ 5, 7 ಮತ್ತು 8 ರವರು ಆರೋಪಿ ಚಾಲನೆ ಮಾಡುತ್ತಿದ್ದ ಆಟೋದಲ್ಲಿ ಮನೆಗೆ ಬರುತ್ತಿದ್ದೆವು. ಶ್ರೀರಂಗಪಟ್ಟಣದ ಬಳಿ ಬಂದಾಗ ರಸ್ತೆಗೆ ನಾಯಿ ಅಡ್ಡ ಬಂದಿದ್ದು ಅದನ್ನು ತಪ್ಪಿಸುವ ಸಲುವಾಗಿ ಆರೋಪಿ ಪ್ರಯತ್ನಿಸಿದ್ದು, ಆ ಸಮಯದಲ್ಲಿ ಆಟೋ ನಿಯಂತ್ರಣ ತಪ್ಪಿ ರಸ್ತೆ ಪಕ್ಕದ ತೋಟಕ್ಕೆ ಬಿದ್ದಿರುತ್ತದೆ. ಆ ಸಮಯದಲ್ಲಿ ಇಕ್ಬಾಲ್ ಪಾಷರವರು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ, ಉಳಿದವರಿಗೆಲ್ಲಾ ಸಣ್ಣಪುಟ್ಟ ಗಾಯಗಳಾಗಿರುತ್ತವೆ. ಆ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

*(ಈ ಹಂತದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)*

**<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>**

ಆ ದಿನ ಆರೋಪಿ ಸದರಿ ಆಟೋವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸುಳ್ಳು. ನಾನು ಹೇಳಿದಂತೆ ನಾಯಿ ರಸ್ತೆಗೆ ಅಡ್ಡ ಬಂದಿರುವುದಿಲ್ಲ ಎಂದರೆ ಸುಳ್ಳು.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಸಂಪೂರ್ಣ ಹೇಳಿಕೆಯನ್ನು ಸಾಕ್ಷಿಯವರಿಗೆ ಓದಿ ಹೇಳಲಾಗಿ ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿಯು ನನ್ನ ಸಂಬಂಧಿಕನಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು :</u>** ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**